# ಕರ್ನಾಟಕ ವಿಧಾನ ಪರಿಷತ್ತು

## ಶ್ರೀ ಸುನೀಲ್‌ಗೌಡ ಬಿ. ಪಾಟೀಲ್, ಮಾನ್ಯ ವಿಧಾನ ಪರಿಷತ್ ಸದಸ್ಯರು, ಇವರು ನಿಯಮ 72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.

**ವಿಷಯ:-**

ವಿಜಯಪುರ ಮತ್ತು ಬಾಗಲಕೋಟ್ ಜಿಲ್ಲೆಗಳಲ್ಲಿ ತಳವಾರ ಹಾಗೂ ಪರಿವಾರ ಜಾತಿಯ ಸಮಾಜಗಳಿಗೆ ಪರಿಶಿಷ್ಟ ಪಂಗಡದ (ಎಸ್‌ಟಿ) ಜಾತಿ ಪ್ರಮಾಣ ಪತ್ರವನ್ನು ವಿತರಿಸಲು ಅಧಿಕಾರಿಗಳು ನಿರಾಕರಿಸುತ್ತಿರುವುದರಿಂದ ಸದರಿ ಸಮಾಜದವರು ಸರ್ಕಾರಿ ಸೌಲಭ್ಯಗಳಿಂದ ವಂಚಿತರಾಗುತ್ತಿದ್ದಾರೆ. ಆದ್ದರಿಂದ ಈ ಸಮಾಜದ ಜನರಿಗೆ ಪರಿಶಿಷ್ಟ ಪಂಗಡದ ಜಾತಿ ಪ್ರಮಾಣ ಪತ್ರ ವಿತರಿಸುವಲ್ಲಿ ಆಗಿರುವ ಲೋಪದೋಷಗಳನ್ನು ಸರಿಪಡಿಸುವಂತೆ ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯಬಯಸುತ್ತೇನೆ.

**ಉತ್ತರ:**

ಕರ್ನಾಟಕ ರಾಜ್ಯದ ಪರಿಶಿಷ್ಟ ಪಂಗಡದ ಪಟ್ಟಿಯ ಕ್ರ.ಸಂ. 38 ರಲ್ಲಿರುವ Nayaka, Naikda, Choliwala Nayak, Kapadiya Nayak, Mota Nayak, Nana Nayak ಜಾತಿಗಳ ಪರ್ಯಾಯ ಪದಗಳನ್ನಾಗಿ ಪರಿವಾರ ಮತ್ತು ತಳವಾರ ಜಾತಿಗಳನ್ನು ಸೇರಿಸುವ ಸಂಬಂಧ ನಿರ್ದೇಶಕರು, ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು ರವರಿಂದ ಕುಲಶಾಸ್ತ್ರೀಯ ಅಧ್ಯಯನ ವರದಿ ಪಡೆದು, ಸದರಿ ವರದಿಯಲ್ಲಿನ ಶಿಫಾರಸ್ಸಿನನ್ವಯ ಸಚಿವ ಸಂಪುಟದ ಅನುಮೋದನೆ ಪಡೆದು ಕರ್ನಾಟಕ ರಾಜ್ಯದ ಪರಿಶಿಷ್ಟ ಪಂಗಡದ ಪಟ್ಟಿಯ ಕ್ರ.ಸಂ. 38 ರಲ್ಲಿರುವ Nayaka, Naikda, Choliwala Nayak, Kapadiya Nayak, Mota Nayak, Nana Nayak ಜಾತಿಗಳ ಪರ್ಯಾಯ ಪದಗಳನ್ನಾಗಿ ಪರಿವಾರ ಮತ್ತು ತಳವಾರ ಜಾತಿಗಳನ್ನು ಸೇರಿಸುವಂತೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು 2014ನೇ ಸಾಲಿನಲ್ಲಿ ಸಲ್ಲಿಸಲಾಗಿತ್ತು.

ಕೇಂದ್ರ ಸರ್ಕಾರದ ದಿನಾಂಕ:19.03.2020ರ ಅಧಿಸೂಚನೆಯಲ್ಲಿ ಪರಿಶಿಷ್ಟ ಪಂಗಡದ ಕ್ರ.ಸಂ:38ರಲ್ಲಿರುವ Naikda, Nayaka ಪರ್ಯಾಯ ಪದಗಳಾದ (Parivara ಮತ್ತು Talawara) ಜಾತಿಗಳನ್ನು ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಿರುತ್ತದೆ. ಅದರಂತೆ ರಾಜ್ಯ ಸರ್ಕಾರವು ದಿನಾಂಕ:28.05.2020ರಂದು ಅಧಿಸೂಚನೆ ಹೊರಡಿಸಿರುತ್ತದೆ.

ಮೇಲ್ಕಂಡ ಆದೇಶಗಳಂತೆ ಜಾತಿ ಪ್ರಮಾಣ ಪತ್ರವನ್ನು ವಿತರಿಸುವಂತೆ ದಿನಾಂಕ:06.06.2020 ಮತ್ತು 31.08.2020ರಂದು ಸುತ್ತೋಲೆಗಳನ್ನು ಹೊರಡಿಸಿ, ನಿಯಮಾನುಸಾರ ನೈಜವಾದ ಪರಿಶಿಷ್ಟ ಪಂಗಡದ ಜಾತಿಗೆ ಸೇರಿದ ಪರಿವಾರ ಹಾಗೂ ತಳವಾರ ವ್ಯಕ್ತಿಗಳಿಗೆ ಯಾವುದೇ ತೊಂದರೆಯಾಗದಂತೆ ಹಾಗೂ ನಿಗಧಿತ ಅವಧಿಯೊಳಗೆ ಜಾತಿ ಪ್ರಮಾಣ ಪತ್ರ ನೀಡುವಂತೆ ಜಾತಿ ಪ್ರಮಾಣ ಪತ್ರ ವಿತರಿಸುವ ಸಂಬಂಧಿಸಿದ ಪ್ರಾಧಿಕಾರಗಳಿಗೆ ಸೂಚನೆ ನೀಡಲಾಗಿರುತ್ತದೆ. ತಳವಾರ ಜಾತಿಗೆ ಸಂಬಂಧಪಟ್ಟಂತೆ ಕೆಲವರು ಆಕ್ಷೇಪಣೆಗಳನ್ನು ಎತ್ತಿರುತ್ತಾರೆ. ಆದ್ದರಿಂದ, ಈ ಬಗ್ಗೆ ಭಾರತ ಸರ್ಕಾರದಿಂದ ಸ್ಪಷ್ಟೀಕರಣ ಕೋರಲಾಗಿದ್ದು, ಭಾರತ ಸರ್ಕಾರದಿಂದ ಸ್ಪಷ್ಟೀಕರಣ ಸ್ವೀಕೃತವಾದ ನಂತರ ಈ ಬಗ್ಗೆ ಪರಿಶೀಲಿಸಲಾಗುವುದು.

**ಸಕಇ 211 ಎಸ್‌ಎಡಿ 2020**

(ಕೋಟ ಶ್ರೀನಿವಾಸ ಪೂಜಾರಿ)
ಮುಜರಾಯಿ, ಮೀನುಗಾರಿಕೆ, ಬಂದರು ಹಾಗೂ
ಒಳನಾಡು ಜಲಸಾರಿಗೆ ಸಚಿವರು.